ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ: **2289/2024**

ಪಿರ್ಯಾದಿ : ಕೆ.ವಿ.ಬಾಲನ್, ವಯಸ್ಸು ಸುಮಾರು 60 ವರ್ಷ,
ಬಿನ್ ವೇಲಾಯುಧನ್, ಟ್ರೇಡರ್,
ದೀಪಾ ಪ್ರಾವಿಷನ್ ಸ್ಟೋರ್, ವಾಸಃ ಬೀಜುವಳ್ಳಿ ಗ್ರಾಮ,
ಹಳಸೆ ಅಂಚೆ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

ಆರೋಪಿ : ಪ್ರಸನ್.ಎಸ್, ವಯಸ್ಸು ಸುಮಾರು 45 ವರ್ಷ,
ಬಿನ್ ಸುಂದರ, ಆಟೋ ಚಾಲಕ, ವಾಸಃ ಹೊಸಪೇಟೆ,
ಹಾಂದಿ ಗ್ರಾಮ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ದಿನಾಂಕ 14.08.2024 ರಂದು ಸಂಪರ್ಕಿಸಿ, ನಿಮ್ಮ ಕುಟುಂಬದ ತುರ್ತು ಹಣದ ಅವಶ್ಯಕತೆಗಳಿಗಾಗಿ ಅವರಿಂದ 1,00,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಸತ್ತಿಹಳ್ಳಿ ಶಾಖೆಯ ಚೆಕ್ ಸಂಖ್ಯೆ 759251, ದಿನಾಂಕ 14.10.2024, ರೂ.1,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 04.11.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ  2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(*ದಿನಾಂಕ 16.09.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ*,* ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು*.* ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

**Sd/-**

ಮೂಡಿಗೆರೆ
ದಿನಾಂಕಃ 16.09.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**